# ಕರ್ನಾಟಕ ಸರ್ಕಾರ

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ

ಸರ್ವದೃಷ್ಟಿ ಸಮದರ್ಶಿತಾ:







# "ನೂತನ ಕಛೇರಿ, ಲಾಂಛನ & ಜಾಲತಾಣ ಉದ್ಘಾಟನೆ"

-: ಉದ್ಘಾಟನೆ :-

## ಶ್ರೀ ಬಿ.ಎಸ್. ಯಡಿಯೂರಪ್ಪ

ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ



ಸ್ಥಳ : ನಂ. 14/3, ಅನ್ನೆಕ್ಸ್ ಕಟ್ಟಡ, 3ನೇ ಮಹಡಿ, ಶ್ರೀ ಅರವಿಂದ ಭವನ,
ಮಿಥಿಕ್ ಸೊಸೈಟಿ ಆವರಣ, ನೃಪತುಂಗ ರಸ್ತೆ, ಬೆಂಗಳೂರು – 560001.

Scanned with CamScanner

## ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಬಗ್ಗೆ

ಕರ್ನಾಟಕದಲ್ಲಿ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯಗಳ ಉನ್ನತಿಗಾಗಿ 2018-19ನೇ ಸಾಲಿನ ಬಜೆಟ್ ಪ್ರಕಟಣೆಯ ಪ್ರಕಾರ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು (ಕೆಎಸ್‌ಬಿಡಿಬಿ) ಸ್ಥಾಪಿಸಲಾಯಿತು.

ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮಾಜದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಮತ್ತು ಮೂಲ ಸೌಕರ್ಯಗಳನ್ನು ಒದಗಿಸಿ, ಅವರ ಜೀವನ ಮಟ್ಟವನ್ನು ಉನ್ನತೀಕರಿಸಲು ಉದ್ದೇಶಿಸಿ, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು, ಕರ್ನಾಟಕ ಸರ್ಕಾರವು ಸ್ಥಾಪನೆ ಮಾಡಿದ್ದು, ಅದನ್ನು ಕಂಪೆನಿ ಕಾಯ್ದೆ 2013ರ ಸೆಕ್ಷನ್ 8ರ ಅಡಿಯಲ್ಲಿ 2019ರ ಮಾರ್ಚ್ 01 ರಂದು ರಾಜ್ಯ ಸರ್ಕಾರಿ ಕಂಪನಿಯಾಗಿ ನೋಂದಾಯಿಸಲಾಗಿದೆ. ಯೋಜನೆಗಳಿಗೆ 20 ಕೋಟಿ ರೂಪಾಯಿಗಳನ್ನು ಹಾಗೂ ಬಂಡವಾಳ ವೆಚ್ಚಕ್ಕೆ 5 ಕೋಟಿ ರೂಪಾಯಿಗಳನ್ನು ಸರ್ಕಾರದಿಂದ ಅನುದಾನವನ್ನಾಗಿ 2018-19 ಸಾಲಿನ ಬಜೇಟ್‌ನಲ್ಲಿ ನೀಡಲಾಗಿದೆ.

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಮೂಲಕ ರಾಜ್ಯದಲ್ಲಿ ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ಅಭಿವೃದ್ಧಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವ-ಉದ್ಯೋಗ, ಮೂಲ ಸೌಕರ್ಯಗಳ ಅಭಿವೃದ್ಧಿ ಒಳಗೊಂಡ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುವುದು.

## ನಿರ್ದೇಶಕ ಮಂಡಳಿ

**ಶ್ರೀ ಹಳೇಬೀಡು ಶ್ಯಾಮಣ್ಣ ಸಚ್ಚಿದಾನಂದ ಮೂರ್ತಿ, ಅಧ್ಯಕ್ಷರು.**

ಶ್ರೀ ಹೆಚ್.ಎಸ್.ಸಚ್ಚಿದಾನಂದ ಮೂರ್ತಿಯವರು ಮಂಡಳಿಯ ಅಧ್ಯಕ್ಷರಾಗಿದ್ದು, ಈ ಹಿಂದೆ ಕಿಯೋನಿಕ್ಸ್‌ನ ಅಧ್ಯಕ್ಷರಾಗಿಯೂ ದುಡಿದ ಅನುಭವವುಳ್ಳವರಾಗಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಹಾಗೂ ಭಾರತೀಯ ಜನತಾ ಪಕ್ಷದಲ್ಲಿ ಕಾರ್ಯಕರ್ತರಾಗಿ ಆರಂಭಿಸಿ 38 ವರ್ಷಗಳಿಂದ ಸಮಾಜಸೇವೆ ಮಾಡುತ್ತಿದ್ದು, ಭಾ.ಜ.ಪ.ದ ಜಿಲ್ಲಾ ಅಧ್ಯಕ್ಷರಾಗಿ ಸಹ ಕಾರ್ಯನಿರ್ವಹಿಸಿರುತ್ತಾರೆ. ದಿನಾಂಕ 6-1-2020 ರಂದು ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿರುತ್ತಾರೆ.

**ಶ್ರೀ ಟಿ.ಕೆ. ಅನಿಲ್ ಕುಮಾರ್, ಭಾ.ಆ.ಸೇ.**

ಭಾರತೀಯ ಆಡಳಿತ ಸೇವೆಯ ಅಧಿಕಾರಿಗಳಾದ ಶ್ರೀ ಟಿ.ಕೆ. ಅನಿಲ್ ಕುಮಾರ್, ಇವರು ಕರ್ನಾಟಕ ಸರ್ಕಾರದ ಮುಜರಾಯಿ ಇಲಾಖೆಯ ಕಾರ್ಯದರ್ಶಿಗಳಾಗಿದ್ದು, ಮಂಡಳಿಯಲ್ಲಿ ಸರ್ಕಾರದಿಂದ ನಾಮನಿರ್ದೇಶಿತ ನಿರ್ದೇಶಕರಾಗಿದ್ದಾರೆ.

**ಶ್ರೀಮತಿ ಚಿತ್ರದುರ್ಗ ಪಾಲಯ್ಯ ಶೈಲಜ, ಭಾ.ಆ.ಸೇ**

ಭಾರತೀಯ ಆಡಳಿತ ಸೇವೆಯ ಅಧಿಕಾರಿಗಳಾದ ಶ್ರೀಮತಿ ಸಿ.ಪಿ. ಶೈಲಜ, ಭಾ.ಆ.ಸೇ ಇವರು ಕರ್ನಾಟಕ ಸರ್ಕಾರದ ಧಾರ್ಮಿಕ ದತ್ತಿ ಇಲಾಖೆಯ ಹಿಂದಿನ ಆಯುಕ್ತರಾಗಿದ್ದು, ಮಂಡಳಿಯಲ್ಲಿ ಸರ್ಕಾರದಿಂದ ನಾಮನಿರ್ದೇಶಿತ ನಿರ್ದೇಶಕರಾಗಿದ್ದಾರೆ. ಪ್ರಸ್ತ ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರಾಗಿರುವ ಶ್ರೀಮತಿ ರೋಹಿಣಿ ಸಿಂಧೂರಿ, ಭಾ.ಆ.ಸೇ. ರವರು ನಿರ್ದೇಶಕ ಮಂಡಳಿಯನ್ನು ಸೇರಲಿದ್ದಾರೆ.

**ಶ್ರೀಮತಿ ಭಾನುಮತಿ ಕರುಣಾಕರನ್**

ಶ್ರೀಮತಿ ಭಾನುಮತಿ ಕರುಣಾಕರನ್ ಇವರು ಕರ್ನಾಟಕ ಸರ್ಕಾರದ ಮುಜರಾಯಿ ಇಲಾಖೆಯ ಜಂಟಿ ಕಾರ್ಯದರ್ಶಿಗಳಾಗಿದ್ದು, ಮಂಡಳಿಯಲ್ಲಿ ಸರ್ಕಾರದಿಂದ ನಾಮನಿರ್ದೇಶಿತ ನಿರ್ದೇಶಕರಾಗಿದ್ದಾರೆ.

**ಶ್ರೀ ಗುಂಡ್ಲುಪೇಟೆ ವೆಂಕಟಾಚಲಯ್ಯ ಶ್ರೀಧರ್**

ಗುಂಡ್ಲುಪೇಟೆ ವೆಂಕಟಾಚಲಯ್ಯ ಶ್ರೀಧರ್, ಇವರು ಕರ್ನಾಟಕ ಸರ್ಕಾರದ ಮುಜರಾಯಿ ಇಲಾಖೆಯ ಆಯುಕ್ತರಿಗೆ ಕೇಂದ್ರ ಸ್ಥಾನಿಕ ಸಹಾಯಕರಾಗಿದ್ದು, ಮಂಡಳಿಯಲ್ಲಿ ಸರ್ಕಾರದಿಂದ ನಾಮನಿರ್ದೇಶಿತ ನಿರ್ದೇಶಕರಾಗಿದ್ದಾರೆ.

**ಗುರುರಾಜ್ ರಶ್ಮಿ, ಕ.ಆ.ಸೇ. ವ್ಯವಸ್ಥಾಪಕ ನಿರ್ದೇಶಕರು**

ಕರ್ನಾಟಕ ಆಡಳಿತ ಸೇವೆಯ ಅಧಿಕಾರಿಗಳಾದ ಗುರುರಾಜ್ ರಶ್ಮಿ, ಕ.ಆ.ಸೇ. ಇವರು ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾಗಿದ್ದು, ಸರ್ಕಾರದಿಂದ ನಿಯೋಜನೆಗೊಂಡಿರುತ್ತಾರೆ.

Scanned with CamScanner

## ಶಿಕ್ಷಣ ಮತ್ತು ವೇದಾಧ್ಯಯನ

- **ಸಾಂದೀಪನಿ ಶಿಷ್ಯವೇತನ :-**
  * ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಕೋರ್ಸ್‌ಗಳನ್ನು ಕಲಿಯುತ್ತಿರುವ ಅರ್ಹ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಗಳನ್ನು ಪಾವತಿ ಮಾಡುವುದು.
  * ಭಾರತದಲ್ಲಿ ಹಾಗೂ ಹೊರ ದೇಶಗಳಲ್ಲಿ ಉನ್ನತ ಶಿಕ್ಷಣ ಪಡೆಯಲಿಚ್ಚಿಸುವ ಅರ್ಹ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಅತೀ ಕಡಿಮೆ / ಶೂನ್ಯ ಬಡ್ಡಿ ದರದಲ್ಲಿ ಶೈಕ್ಷಣಿಕ ಸಾಲ ಒದಗಿಸಲು ಬ್ಯಾಂಕ್‌ಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವುದು.
  * ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ಅರ್ಹ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ನಿರ್ವಹಣಾ ವೆಚ್ಚ (Day Scholar / Hosteller Maintenance) ಹಾಗೂ ಶುಲ್ಕ ಮರುಪಾವತಿ (Fee Reimbursement) ಒದಗಿಸುವುದು.
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಆಚಾರ್ಯತ್ರಯ ವೇದ ಶಿಷ್ಯವೇತನ :-**
  * ಬ್ರಾಹ್ಮಣ ಸಮುದಾಯದ ವೇದ ವಿದ್ಯಾರ್ಥಿಗಳಿಗೆ/ಆಗಮ ವಿದ್ಯಾರ್ಥಿಗಳಿಗೆ/ಆಗಮಿಕರಿಗೆ ಮತ್ತು ಸಂಸ್ಕೃತ ವಿದ್ಯಾರ್ಥಿಗಳಿಗೆ/ವಿದ್ವಾಂಸರಿಗೆ ಶಿಷ್ಯ ವೇತನ ನೀಡುವುದು.
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ವಿಶ್ವಾಮಿತ್ರ ಪ್ರತಿಭಾ ಪುರಸ್ಕಾರ :-**
  * ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳ ಬ್ರಾಹ್ಮಣ ಸಾಧಕರಿಗೆ ಪ್ರತಿಭಾ ಪುರಸ್ಕಾರ ನೀಡಿ ಪ್ರೋತ್ಸಾಹಿಸುವುದು.
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಚಾಣಕ್ಯ ಆಡಳಿತ ತರಬೇತಿ ಯೋಜನೆ :-**
  * ಐ.ಎ.ಎಸ್, ಐ.ಪಿ.ಎಸ್, ಐ.ಎಫ್.ಎಸ್, ಐ.ಆರ್.ಎಸ್, ಕೆ.ಎ.ಎಸ್, ಇತ್ಯಾದಿ ಪರೀಕ್ಷೆಗಳ ಪ್ರಾಥಮಿಕ ಹಂತದ ಪರೀಕ್ಷೆ ಉತ್ತೀರ್ಣರಾದ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಮುಖ್ಯ ಪರೀಕ್ಷೆಗಾಗಿ ಉಚಿತ ತರಬೇತಿ ನೀಡುವುದು.
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಸನ್ನಿಧಿ ಯೋಜನೆ**
  * ಅರ್ಹ ಪ್ರಿ ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ಬ್ರಾಹ್ಮಣ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ & ಉಚಿತ ಹಾಸ್ಟಲ್ ನಿರ್ಮಾಣ/ಹಾಸ್ಟೆಲ್ ಸೌಲಭ್ಯ ಕಲ್ಪಿಸುವುದು.
  * ಬ್ರಾಹ್ಮಣ ಉದ್ಯೋಗಸ್ಥ ಮಹಿಳೆಯರಿಗೆ ಹಾಸ್ಟಲ್‌ಗಳ ನಿರ್ಮಾಣ. ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.



## ಉದ್ಯಮಶೀಲತೆ

- **ಸರ್.ಎಂ. ವಿಶ್ವೇಶ್ವರಯ್ಯ ಕೌಶಲ್ಯಾಭಿವೃದ್ಧಿ ಯೋಜನೆ :-**
  * ಬ್ರಾಹ್ಮಣರಿಗೆ ಉದ್ಯೋಗ/ಸ್ವಯಂ ಉದ್ಯೋಗ/ಕೌಶಲ್ಯಾಭಿವೃದ್ಧಿಗಾಗಿ ಉದ್ಯೋಗ ಮೇಳಗಳನ್ನು ಆಯೋಜಿಸುವುದು, ತರಬೇತಿ ಕೇಂದ್ರಗಳನ್ನು ತೆರೆಯುವುದು.
  * ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಚಾರ್ಟೆಡ್ ಅಕೌಂಟೇನ್ಸಿ, ಕಂಪನಿ ಸೆಕ್ರೇಟರಿ ಇನ್ನಿತರ ವೃತ್ತಿಪರ ಪರೀಕ್ಷೆಗಳಿಗೆ ಉಚಿತ ಶಿಕ್ಷಣ / ತರಬೇತಿ.
  * ಸಿ.ಇ.ಟಿ, ಜೆ.ಇ.ಇ. ನೀಟ್ ಇತ್ಯಾದಿ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ತರಬೇತಿ ನಡೆಸುವುದು.
- **ಬ್ರಾಹ್ಮಣ ಮಹಿಳೆಯರಿಗೆ ಕರಕುಶಲ ವಸ್ತುಗಳ ತಯಾರಿಕೆಗಾಗಿ/ ಗುಡಿ ಕೈಗಾರಿಕೆಗಾಗಿ ತರಬೇತಿ, ಸಹಾಯಧನ ಪಾವತಿ ಹಾಗೂ ಮಾರುಕಟ್ಟೆ ನಿರ್ಮಾಣ.**
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಬ್ರಾಹ್ಮಣ ಸ್ವಸಹಾಯ ಸಂಘಗಳ ಸ್ಥಾಪನೆ.**
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಪುರುಷೋತ್ತಮ ಯೋಜನೆ :- ಸ್ವಯಂ ಉದ್ಯೋಗಕ್ಕೆ ಪ್ರೇರಣೆ ಹಾಗೂ ಸಹಾಯ**
  * ಸ್ವಯಂ ಉದ್ಯೋಗ/ನವೋದ್ಯಮ (Start-ups) ಪ್ರಾರಂಭಿಸಲು ಇಚ್ಚಿಸುವ ಅರ್ಹ ಬ್ರಾಹ್ಮಣ ಉದ್ಯಮಿಗಳಿಗೆ ಆರಂಭಿಕ ಸಹಾಯ ಧನ ನೀಡುವುದು.
  * ಬ್ರಾಹ್ಮಣರಿಗಾಗಿ ಸಂಶೋಧನ ಮತ್ತು ತರಬೇತಿ ಕೇಂದ್ರಗಳನ್ನು ಸ್ಥಾಪಿಸುವುದು.
  * ಬ್ರಾಹ್ಮಣರಿಗಾಗಿ ಔದ್ಯಮಿಕ ಪೂರ್ವಪಾಲನ ಕೇಂದ್ರ (Business Incubation Centres)
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಅನ್ನದಾತ ಯೋಜನೆ :-**
  * ಕೃಷಿ ಆಧಾರಿತ ಉದ್ಯಮಗಳನ್ನು ಸ್ಥಾಪಿಸಲು ಕಡಿಮೆ ಬಡ್ಡಿ ದರಗಳಲ್ಲಿ ಅರ್ಹ ಬ್ರಾಹ್ಮಣ ರೈತರಿಗೆ ಸಾಲ ಒದಗಿಸುವುದು.
  * ವ್ಯವಸಾಯಕ್ಕಾಗಿ ತೆರೆದ ಬಾವಿ ಅಥವಾ ಬೋರ್‌ವೆಲ್ ಗಳನ್ನು ಕೊರೆಯಲು ಅರ್ಹ ಬ್ರಾಹ್ಮಣ ರೈತರಿಗೆ ಸಹಾಯ ಧನ ಒದಗಿಸುವುದು.
  * ಹೈನುಗಾರಿಕೆ ಹಾಗೂ ಕೃಷಿ ಆಧಾರಿತ ಚಟುವಟಿಕೆಗಳಿಗೆ ಬ್ರಾಹ್ಮಣ ರೈತರಿಗೆ ಸಹಾಯಧನ ಮತ್ತು ತರಬೇತಿ
  * ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.
- **ಎಲ್ಲಾ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.**



Scanned with CamScanner

# ಸಾಮಾಜಿಕ ಯೋಜನೆಗಳು

• **ಸುಭದ್ರ :-**

* ಬ್ರಾಹ್ಮಣ ಸಮುದಾಯದ ಅನಾಥ/ನಿರಾಶ್ರಿತ ಅಂಗವಿಕಲ, ವಿಧವೆ ಮಹಿಳೆಯರು, ಹಿರಿಯ ನಾಗರಿಕರಿಗೆ ಮಾಸಿಕ ಪಿಂಚಣಿ ಪಾವತಿಸುವುದು, ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.

• **ಸೌಖ್ಯ :-**

* ನಿರಾಶ್ರಿತರಾದ ಬ್ರಾಹ್ಮಣ ವಿಧವೆ ಹಾಗೂ ಹಿರಿಯನಾಗರೀಕರಿಗೆ ಆಶ್ರಯ ಕಲ್ಪಿಸಲು ವೃದ್ಧಾಶ್ರಮಗಳ ಸ್ಥಾಪನೆ/ ವೃದ್ಧಾಶ್ರಮ ವೆಚ್ಚ ಮರುಪಾವತಿ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿ ಮಾಡುವುದು.
* ಅರ್ಹ ಬ್ರಾಹ್ಮಣರಿಗೆ ಉಚಿತ ವೈದ್ಯಕೀಯ ತಪಾಸಣೆ ಆಯೋಜಿಸುವುದು.

• **ಕಲ್ಯಾಣ :-**

* ಬ್ರಾಹ್ಮಣರಿಗಾಗಿ ಸಾಮೂಹಿಕ ವಿವಾಹ / ಉಪನಯನಗಳನ್ನು ಆಯೋಜಿಸುವುದು.
* ಬಡ ಬ್ರಾಹ್ಮಣ ಕೃಷಿಕರನ್ನು/ ಅಡಿಗೆಯವರನ್ನು / ಪುರೋಹಿತರನ್ನು ಮದುವೆಯಾಗುವ ವಧುವಿನ ಹೆಸರಲ್ಲಿ ನಿಗದಿತ ಮೊತ್ತದ ವಿತ್ತಬಾಂಡ್ ವಿತರಿಸುವುದು.

• **ಚೈತನ್ಯ ಉತ್ಸವ :-**

* ಬ್ರಾಹ್ಮಣ ಸಮುದಾಯದ ಯುವ ಪೀಳಿಗೆಯ ಸಂಘಟನೆಗಾಗಿ ಯುವ ಉತ್ಸವಗಳನ್ನು ಆಯೋಜಿಸುವುದು.
* ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವ ಬ್ರಾಹ್ಮಣ ಯುವಕ-ಯುವತಿಯರಿಗೆ ಪ್ರೋತ್ಸಾಹ ಹಾಗೂ ಸಹಾಯಧನ ಪಾವತಿ. ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.

• **ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು.**

# ಇತರೆ ಸಾಮಾಜಿಕ ಯೋಜನೆಗಳು

* ಕಡಿಮೆ ವೆಚ್ಚ ಮನೆಗಳನ್ನು ಅರ್ಹ ಬ್ರಾಹ್ಮಣರಿಗೆ ಮಂಜೂರು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಡುವುದು.
* ಬ್ರಾಹ್ಮಣ ಸಮುದಾಯದ ಬಗ್ಗೆ ರಾಜ್ಯಾದ್ಯಂತ ಸರ್ವೇ ಕೈಗೊಳ್ಳುವುದು.
* ಅಂತ್ಯಕಾಲದಲ್ಲಿರುವ ಮತ್ತು ಧೀರ್ಘಕಾಲಿಕ ರೋಗಿಗಳಾಗಿರುವ ಬ್ರಾಹ್ಮಣರು ವೈದ್ಯಕೀಯಧನ ಸಹಾಯ ನೀಡುವುದು.
* ಬ್ರಾಹ್ಮಣರಿಗೆ ವೈದ್ಯಕೀಯ ಸೌಲಭ್ಯ ಪಡೆದುಕೊಳ್ಳಲು ಧನಸಹಾಯ ನೀಡುವುದು.
* ಬ್ರಾಹ್ಮಣರ ಅಪರಕರ್ಮಗಳನ್ನು ಕಡಿಮೆ ವೆಚ್ಚದಲ್ಲಿ ನಡೆಸಲು ವ್ಯವಸ್ಥೆ ಕಲ್ಪಿಸುವುದು.
* ನಿರ್ಗತಿಕ ಬ್ರಾಹ್ಮಣರು ನಿಧನರಾದಲ್ಲಿ, ಅಂತ್ಯಕ್ರಿಯೆ ನಡೆಸಲು ಸಹಾಯಧನ ಒದಗಿಸುವುದು
* ಆಚಾರ್ಯತ್ರಯರ ಮತ್ತು ಬ್ರಾಹ್ಮಣ ಸಾಧಕರ ಜಯಂತಿಗಳನ್ನು ಆಚರಿಸುವುದು.
* ಬ್ರಾಹ್ಮಣರಿಗಾಗಿ ಜಿಲ್ಲಾ ಸಹಾಯ ಕೇಂದ್ರಗಳ ಸ್ಥಾಪನೆ.
* ಸಮಾಜದ ಎಲ್ಲಾ ಸಮುದಾಯಗಳೊಂದಿಗೆ ವಿಚಾರಣಾ ಸಂಕೀರ್ಣಗಳನ್ನು ಆಯೋಜಿಸಿ ಭಾರತದ ಸಂವಿಧಾನಕ್ಕೆ ಅನುಗುಣವಾಗಿ ಸಮಾಜದಲ್ಲಿ ಏಕತೆಯ ಸ್ಫೂರ್ತಿ ಬೆಳೆಸುವುದು.
* ಬ್ರಾಹ್ಮಣ ಸಮುದಾಯದ ಸರ್ವೋತೋಮುಖ ಅಭಿವೃದ್ಧಿಗಾಗಿ ಇನ್ನಿತರ ಯಾವುದಾದರೂ ಕಾರ್ಯಚಟುವಟಿಕೆಗಳನ್ನ ಕೈಗೊಳ್ಳುವುದು.
* ಅರ್ಜಿ ಸಲ್ಲಿಕೆಯ ವಿವರಗಳ ಬಗ್ಗೆ ಸೂಕ್ತ ಪ್ರಕಟಣೆ ಹೊರಡಿಸಲಾಗುವುದು

Scanned with CamScanner

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ

ಸರ್ವದೃಷ್ಟಿ ಸಮದರ್ಶಿನಃ

080-22488888

ksbdb.karnataka.gov.in

contact.ksbdb@karnataka.gov.in

No.14/3, Annexe Building, 3rd Floor, Sri Aravinda Bhavan, Mythic Society Premises,
Nrupathunga Road, Bengaluru - 560001.



Scanned with CamScanner